ತುರ್ತು ಕುಡಿಯುವ ನೀರಿನ ಕಾಮಗಾರಿಗಳು

2577(2942); ಶ್ರೀ ಹಾಲಾಡಿ ಶ್ರೀನಿವಾಸ ಶೆಟ್ಟಿ (ಕುಂದಾಪುರ)

ಅ) ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ತುರ್ತು ಕುಡಿಯುವ ನೀರಿನ ಕಾಮಗಾರಿಗೆ ಮೇ ತಿಂಗಳಿನಲ್ಲಿ ಅನುದಾನ ಬಿಡುಗಡೆ ಮಾಡುವುದರಿಂದ ಕಾಮಗಾರಿಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲು ಆಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ ಅಗತ್ಯವಿರುವ ಗ್ರಾಮಗಳಲ್ಲಿ ಸಮರ್ಪಕವಾಗಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಅನುಕೂಲವಾಗುವಂತೆ ಪ್ರತಿ ವರ್ಷದ ಜನವರಿ ತಿಂಗಳಿನಲ್ಲಿ ಅನುದಾನ ಬಿಡುಗಡೆ ಮಾಡಿ ಕುಡಿಯುವ ನೀರಿನ ಸಮಸ್ಯೆ ಪರಿಹರಿಸಲಾಗುವುದೇ?

ಶ್ರೀ ಹೆಚ್.ಕೆ. ಪಾಟೀಲ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)

ಅ) ಆಯವ್ಯಯ ಹಂಚಿಕೆಯನ್ವಯ ಪ್ರತಿ ವರ್ಷ ಅನುದಾನ ಬಿಡುಗಡೆಯಾಗುತ್ತಿದೆ. ಹೆಚ್ಚುವರಿ ಅನುದಾನವನ್ನು ಸಹ ಮಾರ್ಚ್ ತಿಂಗಳಲ್ಲಿ ಒದಗಿಸಲಾಗಿದೆ. ಪ್ರಸಕ್ತ ಸಾಲಿನಲ್ಲಿ ಹಂಚಿಕೆಯನ್ವಯ ಪ್ರಗತಿ ಮತ್ತು ಬೇಡಿಕೆಯನುಸಾರ ಅನುದಾನ ಲಭ್ಯವಾಗಿದೆ. ಈಗಾಗಲೇ ₹ 671.76 ಕೋಟಿ ಅನುದಾನ ಬಿಡುಗಡೆಯಾಗಿದೆ ಮತ್ತು ₹ 315.00 ಕೋಟಿ ವೆಚ್ಚವಾಗಿದೆ.

ಆ) ಕುಡಿಯುವ ನೀರಿನ ಕಾಮಗಾರಿಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲು ಅನುಕೂಲವಾಗುವಂತೆ ಡಿಸೆಂಬರ್, ಜನವರಿ, ಫೆಬ್ರವರಿ ಮತ್ತು ಮಾರ್ಚ್ ಮಾಹೆಗಳಲ್ಲೂ ಕೂಡ ಸರ್ಕಾರದಿಂದ ಅನುದಾನವನ್ನು ಬಿಡುಗಡೆಗೊಳಿಸಲಾಗಿದೆ.